KACM710016162018

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

ಉಪಸ್ಥಿತರು

ಶ್ರೀಮತಿ ಊರ್ಮಿಳ.ವಿ., ಬಿ.ಎ.ಎಲ್., ಎಲ್ಎಲ್‌ಬಿ.,
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.

ದಿನಾಂಕ ಃ **17** ನೇ ಮಾರ್ಚ್ **2026**

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **875/2018**

ಫಿರ್ಯಾದಿ ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

**(**ಪ್ರತಿನಿಧಿಸುವವರುಃ ಸಹಾಯಕ ಸರ್ಕಾರಿ ಅಭಿಯೋಜಕರು**)**

-ವಿರುದ್ಧ-

ಆರೋಪಿ/ತರುಃ

1) ಶ್ರೀನಿವಾಸ ಬಿನ್ ಕಣ್ಣಪ್ಪ, 43 ವರ್ಷ, ಕೂಲಿಕೆಲಸ,
2) ಮಂಜುನಾಥ ಬಿನ್ ಅಪ್ಪಾದೊರೈ, 51 ವರ್ಷ, ವ್ಯವಸಾಯಗಾರರು,
3) ಮಂಜು ಬಿನ್ ಪಳನಿ, 38 ವರ್ಷ, ಕೂಲಿಕೆಲಸ,
4) ಮೋಹನ ಬಿನ್ ಕಂದಸ್ವಾಮಿ, 44 ವರ್ಷ, ವ್ಯವಸಾಯಗಾರರು,
5) ಲಕ್ಷ್ಮಿದೀಪ ಕೋಂ ಶ್ರೀನಿವಾಸ, 42 ವರ್ಷ, ಗೃಹಿಣಿ,
6) ವೀಣಾ ಕೋಂ ಶೇಖರ, 25 ವರ್ಷ, ಗೃಹಿಣಿ,
7) ಭಾಗ್ಯ ಕೋಂ ಮನು, 25 ವರ್ಷ, ಗೃಹಿಣಿ,

ಎಲ್ಲರೂ ವಾಸಃ ದೊಡ್ಡಕುಂದೂರು, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

(ಪ್ರತಿನಿಧಿಸುವವರುಃ ಶ್ರೀ ಅಸೀಂ ಅಹಮದ್, ನ್ಯಾಯವಾದಿಗಳು)

****

Visit **ecourts.gov.in** for updates or download mobile app "**eCourts Services**" from Android or iOS

| | | |
|---|---|---|
| 1 | ಅಪರಾಧ ನಡೆದ ದಿನಾಂಕ | 26.05.2018 |
| 2 | ಅಪರಾಧ ವರದಿ ಮಾಡಿದ ದಿನಾಂಕ | 27.05.2018 |
| 3 | ಆರೋಪಿತರನ್ನು ಬಂಧಿಸಿದ ದಿನಾಂಕ | -- |
| 4 | ಪಿರ್ಯಾದಿಯ ಹೆಸರು | ಶ್ರೀಮತಿ ರಂಜಿತ |
| 5 | ಸಾಕ್ಷಿ ವಿಚಾರಣೆ ಪ್ರಾರಂಭಿಸಿದ ದಿನಾಂಕ | 03.03.2026 |
| 6 | ಸಾಕ್ಷಿ ವಿಚಾರಣೆ ಮುಕ್ತಾಯವಾದ ದಿನಾಂಕ | 05.03.2026 |
| 7 | ಆರೋಪಿಸಲಾದ ಅಪರಾಧಗಳು | ಭಾ.ದ.ಸಂ.ಕಲಂ 448, 323, 504, 506 ಸಹವಾಚಕ ಕಲಂ 149 |
| 8 | ನ್ಯಾಯಾಧೀಶರ ಅಭಿಪ್ರಾಯ | ಆರೋಪಿತರು ನಿರಪರಾಧಿಗಳು |

*******

<u>ತೀರ್ಪು</u>

ಪೊಲೀಸ್ ಉಪನಿರೀಕ್ಷಕರು, ಲಕ್ಕವಳ್ಳಿ ಪೊಲೀಸ್ ಠಾಣೆ ಇವರು ಆರೋಪಿತರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂ 448, 323, 504 ಮತ್ತು 506 ಸಹವಾಚಕ ಕಲಂ 149 ರಡಿಯಲ್ಲಿನ ಶಿಕ್ಷಾರ್ಹ ಅಪರಾಧಕ್ಕಾಗಿ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ.

2. ಈ ಪ್ರಕರಣದ ಸಂಕ್ಷಿಪ್ತ ಸಾರಾಂಶವೇನೆಂದರೆ:-

ದಿನಾಂಕ 27.05.2018 ರಂದು ಮಧ್ಯಾಹ್ನ 01.00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ, ದೊಡ್ಡಕುಂದೂರು ಗ್ರಾಮದ ವಾಸಿಯಾದ ಚಾಸಾ-1 ಶ್ರೀಮತಿ ರಂಜಿತರವರು ತನ್ನ ಗಂಡ ರಾಮ್ ರಾಜ್ ರವರು ದಿನಾಂಕ 26.05.2018 ರಂದು ಮೃತಪಟ್ಟಿದ್ದರಿಂದ ಅವರ ಅಂತ್ಯಕ್ರಿಯೆಯನ್ನು ಮುಗಿಸಿಕೊಂಡು ಚಾಸಾ-1, ಚಾಸಾ-2 ಶ್ರೀಮತಿ ಲಕ್ಷ್ಮಿ, ಚಾಸಾ-3 ಶ್ರೀಮತಿ ರಾಧ ಮತ್ತು ಚಾಸಾ-4 ಶ್ರೀಮತಿ ಮಲ್ಲಿಗ ರವರುಗಳು ಮನೆಗೆ ಬಂದಾಗ ಆರೋಪಿತರು ಏಕೋದ್ದೇಶದಿಂದ ಬಂದು,

Visit **ecourts.gov.in** for updates or download mobile app "**eCourts Services**" from Android or iOS

KACM710016162018

ಏಕಾಏಕಿ ಅವಾಚ್ಯ ಶಬ್ದಗಳಿಂದ ಚಾಸಾ-1 ರಿಂದ 4 ರವರಿಗೆ ಬೈದು, ಚಾಸಾ-1 ರವರ ಮನೆಯ ಒಳಗಡೆ ನುಗ್ಗಿ, 1 ರಿಂದ 4 ನೇ ಆರೋಪಿತರು ಚಾಸಾ-1 ರಿಂದ 4 ರವರಿಗೆ ಕೈಗಳಿಂದ ಹೊಡೆದು ನೋವುಂಟು ಮಾಡಿದ್ದು, 5 ರಿಂದ 7 ನೇ ಆರೋಪಿತರು ಚಾಸಾ-2 ರಿಂದ 4 ರವರಿಗೆ ಕೈಗಳಿಂದ ಹೊಡೆದು ಬಟ್ಟೆಯನ್ನು ಹಿಡಿದು ಎಳೆದಾಡಿ ಹರಿದು ಹಾಕಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಚಾಸಾ-1 ರಿಂದ 4 ರವರಿಗೆ ನಮ್ಮ ತಂಟೆಗೆ ಬಂದರೆ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ. ಆದ್ದರಿಂದ ಆರೋಪಿತರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ.

3. ಪ್ರಸ್ತುತ ಪ್ರಕರಣವು ತನಿಖಾ ಹಂತದಲ್ಲಿರುವಾಗ ಆರೋಪಿತರು ವಕೀಲರ ಮೂಲಕ ಹಾಜರಾಗಿ ಜಾಮೀನು ಅರ್ಜಿಯನ್ನು ಸಲ್ಲಿಸಿ ಜಾಮೀನಿನ ಮೇಲೆ ಬಿಡುಗಡೆ ಹೊಂದಿರುತ್ತಾರೆ. ನಂತರ ತನಿಖಾಧಿಕಾರಿಗಳು ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದು, ನಂತರ ನ್ಯಾಯಾಲಯವು ಆರೋಪಿತರ ವಿರುದ್ಧ ಸಂಜ್ಞೆಯನ್ನು ತೆಗೆದುಕೊಂಡು ಸದರಿಯವರಿಗೆ ಸಮನ್ಸ್ ಹೊರಡಿಸಲಾಯಿತು. ನಂತರ ಆರೋಪಿತರು ನ್ಯಾಯಾಲಯದ ಮುಂದೆ ಹಾಜರಾಗಿದ್ದು, ಆರೋಪಿತರಿಗೆ ಅಭಿಯೋಜನೆಯ ಎಲ್ಲಾ ದಸ್ತಾವೇಜುಗಳನ್ನು ಭಾರತೀಯ ದಂಡ ಪಕ್ರಿಯಾ ಸಂಹಿತೆ ಕಲಂ 207 ರ ಅನುಸಾರ ಒದಗಿಸಲಾಗಿರುತ್ತದೆ. ನಂತರ ಆರೋಪಿತರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂ 504, 448, 323 ಮತ್ತು 506 ಸಹವಾಚಕ ಕಲಂ 149 ರಡಿಯಲ್ಲಿನ ಶಿಕ್ಷಾರ್ಹ ಅಪರಾಧಕ್ಕಾಗಿ ಆರೋಪಣೆಯನ್ನು ರಚಿಸಲಾಯಿತು. ಆರೋಪಣೆಯನ್ನು ನಿರಾಕರಿಸಿ ವಿಚಾರಣೆಯನ್ನು ಬಯಸಿರುತ್ತಾರೆ.

4. ಅಭಿಯೋಜನೆಯು ದೋಷಾರೋಪಣಾ ಪಟ್ಟಿಯಲ್ಲಿ ತೋರಿಸಿರುವ 14 ಸಾಕ್ಷಿದಾರರ ಪೈಕಿ ಚಾಸಾ-1, 3, 4 ಮತ್ತು 2 ರವರು ಕ್ರಮವಾಗಿ ಅಸಾ-1 ರಿಂದ 4 ರಂತೆ ಸಾಕ್ಷ್ಯ ನುಡಿದಿರುತ್ತಾರೆ. ಅಸಾ-1 ರವರು ಪಿರ್ಯಾದುದಾರರು, ಗಾಯಾಳು ಮತ್ತು

Visit **ecourts.gov.in** for updates or download mobile app "**eCourts Services**" from Android or iOS

ಮಹಜರು ಸಾಕ್ಷಿದಾರರಾಗಿ ಹಾಗೂ ಅಸಾ-2 ರಿಂದ 4 ರವರು ಗಾಯಾಳು ಮತ್ತು ಪ್ರತ್ಯಕ್ಷ ಸಾಕ್ಷಿದಾರರಾಗಿ ಅಭಿಯೋಜನೆಗೆ ಪ್ರತಿಕೂಲ ಸಾಕ್ಷ್ಯ ನುಡಿದ ಕಾರಣ ಉಳಿದ ಸಾಕ್ಷಿದಾರರನ್ನು ವಿಚಾರಣೆಗೆ ಒಳಪಡಿಸುವುದರಿಂದ ಅಭಿಯೋಜನೆಗೆ ಯಾವುದೇ ರೀತಿಯ ಸಹಾಯ ಆಗುವುದಿಲ್ಲವೆಂದು ತಿಳಿದು ಸಹಾಯಕ ಸರ್ಕಾರಿ ಅಭಿಯೋಜಕರ ಕೋರಿಕೆಯನ್ನು ತಿರಸ್ಕರಿಸಿ ಉಳಿದ ಸಾಕ್ಷಿದಾರರ ವಿಚಾರಣೆಯನ್ನು ಕೈಬಿಡಲಾಗಿರುತ್ತದೆ. ಅಭಿಯೋಜನೆಯು 4 ದಾಖಲೆಗಳನ್ನು ಹಾಜರುಪಡಿಸಿ ಅದನ್ನು ನಿಪಿ-1 ರಿಂದ 6 ಎಂದು ಗುರ್ತಿಸಿಕೊಂಡಿರುತ್ತದೆ.

5. ಅಭಿಯೋಜನೆಯು ತನ್ನ ಪರವಾಗಿ ವಿಚಾರಣೆ ಮುಗಿಸಿದ ನಂತರ ಈ ಪ್ರಕರಣದಲ್ಲಿ ಆರೋಪಿತರ ವಿರುದ್ಧ ಸಾಕ್ಷ್ಯವು ಇಲ್ಲದೇ ಇರುವುದರಿಂದ ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿನ ಆರೋಪಿತರ ಹೇಳಿಕೆಗಳನ್ನು ಕೈಬಿಡಲಾಗಿರುತ್ತದೆ.

6. ಆರೋಪಿತರು ದಂಡ ಪ್ರಕ್ರಿಯಾ ಸಂಹಿತೆ ಕಲಂ 437(ಎ) ನ್ನು ಪಾಲನೆ ಮಾಡಿರುತ್ತಾರೆ.

7. ಆರೋಪಿತರ ಪರ ಹಾಗೂ ಅಭಿಯೋಜಕರ ಪರ ವಾದ ಪ್ರತಿವಾದಗಳನ್ನು ಆಲಿಸಲಾಯಿತು.

8. ಕಡತದಲ್ಲಿ ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಿದಾಗ ಈ ಕೆಳಕಂಡ ಅಂಶಗಳು ನ್ಯಾಯಾಲಯದ ಪರಿಗಣನೆಗೆ ಉದ್ಭವಿಸಿರುತ್ತದೆ ಃ

**1)** ದಿನಾಂಕ 27.05.2018 ರಂದು ಮಧ್ಯಾಹ್ನ 01.00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ, ದೊಡ್ಡಕುಂದೂರು ಗ್ರಾಮದಲ್ಲಿ ವಾಸಿಯಾದ ಚಾಸಾ-1 ಶ್ರೀಮತಿ ರಂಜಿತರವರು ತನ್ನ ಗಂಡ ರಾಮ್ ರಾಜ್ ರವರು ದಿನಾಂಕ 26.05.2018 ರಂದು ಮೃತಪಟ್ಟಿದ್ದರಿಂದ ಅವರ ಅಂತ್ಯಕ್ರಿಯೆಯನ್ನು ಮುಗಿಸಿಕೊಂಡು ಚಾಸಾ-1 ರಿಂದ 4 ರವರು ಮನೆಗೆ ಬಂದಾಗ ಆರೋಪಿತರು ಏಕೋದ್ದೇಶದಿಂದ

Visit **ecourts.gov.in** for updates or download mobile app "**eCourts Services**" from Android or iOS

ಬಂದು, ಏಕಾಏಕಿ ಅವಾಚ್ಯ ಶಬ್ದಗಳಿಂದ ಚಾಸಾ-1 ರಿಂದ 4 ರವರಿಗೆ ಬೈದು ಅವಮಾನ ಮಾಡಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 149 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

**2)** ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಏಕೋದ್ದೇಶದಿಂದ ಬಂದು ಚಾಸಾ-1 ರವರ ಮನೆ ಒಳಗಡೆ ಅತಿಕ್ರಮ ಪ್ರವೇಶ ಮಾಡಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 448 ಸಹವಾಚಕ ಕಲಂ 149 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

**3)** ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಏಕೋದ್ದೇಶದಿಂದ ಬಂದು 1 ರಿಂದ 4 ನೇ ಆರೋಪಿತರು ಚಾಸಾ-1 ರಿಂದ 4 ರವರಿಗೆ ಕೈಗಳಿಂದ ಹೊಡೆದು ನೋವುಂಟು ಮಾಡಿದ್ದು, 5 ರಿಂದ 7 ನೇ ಆರೋಪಿತರು ಚಾಸಾ-2 ರಿಂದ 4 ರವರಿಗೆ ಕೈಗಳಿಂದ ಹೊಡೆದು ಬಟ್ಟೆಯನ್ನು ಹಿಡಿದು ಎಳೆದಾಡಿ ಹರಿದು ಹಾಕಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 149 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

**4)** ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರು ಏಕೋದ್ದೇಶದಿಂದ ಬಂದು ಚಾಸಾ-1 ರಿಂದ 4 ರವರಿಗೆ ನಮ್ಮ ತಂಟೆಗೆ ಬಂದರೆ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆದ್ದರಿಂದ ಆರೋಪಿತರು ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 149 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸೆಗಿರುತ್ತಾರೆ ಎಂದು ಅಭಿಯೋಜನೆಯವರು ನಿಸ್ಸಂಶಯಾತೀತವಾಗಿ ಸಾಬೀತು ಪಡಿಸಿರುತ್ತಾರೆಯೇ?

5) ಹಾಗಿದ್ದರೆ ಯಾವ ಆಜ್ಞೆ?

Visit **ecourts.gov.in** for updates or download mobile app "**eCourts Services**" from Android or iOS

9. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ ಃ

ಅಂಶ-1 ಃ ನಕಾರಾತ್ಮಕವಾಗಿ,

ಅಂಶ-2 ಃ ನಕಾರಾತ್ಮಕವಾಗಿ,

ಅಂಶ-3 ಃ ನಕಾರಾತ್ಮಕವಾಗಿ,

ಅಂಶ-4 ಃ ನಕಾರಾತ್ಮಕವಾಗಿ,

ಅಂಶ-5 ಃ ಅಂತಿಮ ಆದೇಶದಂತೆ,

-ಃ ಕಾ ರ ಣ ಗ ಳು ಃ-

10. ಅಂಶ-**1** ರಿಂದ **4** ಃ ಈ ಎಲ್ಲಾ ಅಂಶಗಳು ಒಂದಕ್ಕೊಂದು ಪೂರಕವಾಗಿರುವ ಕಾರಣ ಎಲ್ಲಾ ಅಂಶಗಳನ್ನು ಒಟ್ಟಾಗಿ ಚರ್ಚೆಗೆ ತೆಗೆದುಕೊಳ್ಳಲಾಗಿದೆ. ಅಭಿಯೋಜನೆಯು ದಿನಾಂಕ 27.05.2018 ರಂದು ಮಧ್ಯಾಹ್ನ 01.00 ಗಂಟೆ ಸಮಯದಲ್ಲಿ ದೊಡ್ಡಕುಂದೂರು ಗ್ರಾಮದಲ್ಲಿ ಚಾಸಾ-1 ರಿಂದ 4 ರವರು ಮನೆಯಲ್ಲಿದ್ದಾಗ ಆರೋಪಿತರು ಏಕೋದ್ದೇಶದಿಂದ ಬಂದು, ಏಕಾಏಕಿ ಅವಾಚ್ಯ ಶಬ್ದಗಳಿಂದ ಚಾಸಾ-1 ರಿಂದ 4 ರವರಿಗೆ ಬೈದು, ಚಾಸಾ-1 ರವರ ಮನೆಯ ಒಳಗಡೆ ನುಗ್ಗಿ, 1 ರಿಂದ 4 ನೇ ಆರೋಪಿತರು ಚಾಸಾ-1 ರಿಂದ 4 ರವರಿಗೆ ಕೈಗಳಿಂದ ಹೊಡೆದು ನೋವುಂಟು ಮಾಡಿದ್ದು, 5 ರಿಂದ 7 ನೇ ಆರೋಪಿತರು ಚಾಸಾ-2 ರಿಂದ 4 ರವರಿಗೆ ಕೈಗಳಿಂದ ಹೊಡೆದು ಬಟ್ಟೆಯನ್ನು ಹಿಡಿದು ಎಳೆದಾಡಿ ಹರಿದು ಹಾಕಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಚಾಸಾ-1 ರಿಂದ 4 ರವರಿಗೆ ನಮ್ಮ ತಂಟೆಗೆ ಬಂದರೆ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂಬುದನ್ನು ಸಂಶಯಾತೀತವಾಗಿ ಸಾಬೀತು ಪಡಿಸಬೇಕಾಗಿರುತ್ತದೆ.

11. ಚಾಸಾ-1/ಅಸಾ-1 ಈ ಪ್ರಕರಣದ ಪಿರ್ಯಾದುದಾರರು, ಗಾಯಾಳು ಹಾಗೂ ಮಹಜರು ಸಾಕ್ಷಿದಾರರಾಗಿದ್ದು, ತಮ್ಮ ಸಾಕ್ಷ್ಯ ಮುಖ್ಯ ವಿಚಾರಣೆಯಲ್ಲಿ ಆರೋಪಿತರು ತಮ್ಮ ಸಂಬಂಧಿಕರು, ಆರೋಪಿತರು ತನಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದು

KACM710016162018

ಅವಮಾನ ಮಾಡಿರುವುದಿಲ್ಲ, ತಮ್ಮ ಮನೆಯ ಒಳಗೆ ನುಗ್ಗಿ ತನ್ನ ಮೇಲೆ ಯಾವುದೇ ಹಲ್ಲೆ ಮಾಡಿರುವುದಿಲ್ಲ ಹಾಗೂ ಯಾವುದೇ ರೀತಿಯ ಕೊಲೆ ಬೆದರಿಕೆ ಹಾಕಿರುವುದಿಲ್ಲ, ಆರೋಪಿತರಿಂದ ತನಗೆ ಯಾವುದೇ ರೀತಿಯ ತೊಂದರೆಯಾಗಿರುವುದಿಲ್ಲ, ತಾನು ಈ ಪ್ರಕರಣದ ಸಂಬಂಧ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ, ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ ಎಂದು ನುಡಿದು, ಫಿರ್ಯಾದಿನಲ್ಲಿರುವ ತನ್ನ ಸಹಿಯನ್ನು ನಿಪಿ-1(ಎ) ಎಂದು, ಮಹಜರಿನಲ್ಲಿರುವ ತನ್ನ ಸಹಿಯನ್ನು ನಿಪಿ-2(ಎ) ಎಂದು ಹಾಗೂ ನಿಪಿ-3 ರ ಛಾಯಚಿತ್ರದಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿರುತ್ತಾರೆ. ಅಸಾ-1 ರವರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ನ್ಯಾಯಾಲಯದ ಅನುಮತಿ ಮೇರೆಗೆ ಪಾಟೀ ಸವಾಲು ಮಾಡಿದ್ದು, ಪಾಟೀ ಸವಾಲಿನಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರ ಎಲ್ಲಾ ಸಲಹೆಗಳನ್ನು ಅಲ್ಲಗೆಳೆದು, ತಾವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ ಎಂದು ಒಪ್ಪಿಕೊಂಡಿರುತ್ತಾರೆ. ಆ ಕಾರಣ ಅಸಾ-1 ರವರ ಸಾಕ್ಷ್ಯ ಅಭಿಯೋಜನೆಗೆ ಸಹಾಯಕವಾಗುವುದಿಲ್ಲ ಎಂದು ಅಭಿಪ್ರಾಯ ಪಡುತ್ತೇನೆ.

12. ಚಾಸಾ-3/ಅಸಾ-2, ಚಾಸಾ-4/ಅಸಾ-3 ಹಾಗೂ ಚಾಸಾ-2/ಅಸಾ-4 ರವರು ಈ ಪ್ರಕರಣದ ಗಾಯಾಳು ಮತ್ತು ಪ್ರತ್ಯಕ್ಷ ಸಾಕ್ಷಿದಾರರಾಗಿದ್ದು, ತಮ್ಮ ಸಾಕ್ಷ್ಯ ಮುಖ್ಯ ವಿಚಾರಣೆಯಲ್ಲಿ ಆರೋಪಿತರು ತಮ್ಮ ಸಂಬಂಧಿಕರು, ಆರೋಪಿತರು ಚಾಸಾ-1 ಹಾಗೂ ತಮಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುವುದಿಲ್ಲ, ಚಾಸಾ-1 ರವರ ಮನೆಯ ಒಳಗೆ ನುಗ್ಗಿ ಚಾಸಾ-1 ಮತ್ತು ತಮ್ಮ ಮೇಲೆ ಯಾವುದೇ ಹಲ್ಲೆ ಮಾಡಿರುವುದಿಲ್ಲ ಹಾಗೂ ಯಾವುದೇ ರೀತಿಯ ಕೊಲೆ ಬೆದರಿಕೆ ಹಾಕಿರುವುದಿಲ್ಲ, ಆರೋಪಿತರಿಂದ ತಮಗೆ ಯಾವುದೇ ರೀತಿಯ ತೊಂದರೆಯಾಗಿರುವುದಿಲ್ಲ, ತಾವು ಈ ಘಟನೆಯನ್ನು ಕಣ್ಣಾರೆ ಕಂಡಿರುವುದಿಲ್ಲ, ಈ ಪ್ರಕರಣದ ಸಂಬಂಧ ಬೇರೆ ಏನೂ

Visit **ecourts.gov.in** for updates or download mobile app "**eCourts Services**" from Android or iOS

ಗೊತ್ತಿರುವುದಿಲ್ಲ ಎಂದು ನುಡಿದಿರುತ್ತಾರೆ. ಅಸಾ-2 ರಿಂದ 4 ರವರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ನ್ಯಾಯಾಲಯದ ಅನುಮತಿ ಮೇರೆಗೆ ಪಾಟೀ ಸವಾಲು ಮಾಡಿದ್ದು, ಪಾಟೀ ಸವಾಲಿನಲ್ಲಿ ಸದರಿಯವರು ಸಹಾಯಕ ಸರ್ಕಾರಿ ಅಭಿಯೋಜಕರ ಎಲ್ಲಾ ಸಲಹೆಗಳನ್ನು ಅಲ್ಲಗೆಳೆದು, ತಾವು ಪೊಲೀಸರ ಮುಂದೆ ಕ್ರಮವಾಗಿ ನಿಪಿ-4 ರಿಂದ 6 ರಂತೆ ಹೇಳಿಕೆಗಳನ್ನು ನೀಡಿರುತ್ತೇವೆಂದರೆ ಸರಿಯಲ್ಲ, ತಾವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ ಎಂದು ನುಡಿದಿರುತ್ತಾರೆ. ಆ ಕಾರಣ ಅಸಾ-2 ರಿಂದ 4 ರವರ ಸಾಕ್ಷ್ಯ ಅಭಿಯೋಜನೆಗೆ ಸಹಾಯಕವಾಗುವುದಿಲ್ಲ.

13. ಪ್ರಸ್ತುತ ಪ್ರಕರಣದ ಅಸಾ-1 ರವರು ಪಿರ್ಯಾದುದಾರರು, ಗಾಯಾಳು ಮತ್ತು ಮಹಜರು ಸಾಕ್ಷಿದಾರರಾಗಿ ಹಾಗೂ ಅಸಾ-2 ರಿಂದ 4 ರವರು ಗಾಯಾಳು ಮತ್ತು ಪ್ರತ್ಯಕ್ಷ ಸಾಕ್ಷಿದಾರರಾಗಿ ಅಭಿಯೋಜನೆಗೆ ಪ್ರತಿಕೂಲ ಸಾಕ್ಷ್ಯ ನುಡಿದ ಕಾರಣ ಉಳಿದ ಸಾಕ್ಷಿದಾರರನ್ನು ವಿಚಾರಣೆಗೆ ಒಳಪಡಿಸುವುದರಿಂದ ಅಭಿಯೋಜನೆಗೆ ಯಾವುದೇ ರೀತಿಯ ಸಹಾಯ ಆಗುವುದಿಲ್ಲವೆಂದು ತಿಳಿದು ಸಹಾಯಕ ಸರ್ಕಾರಿ ಅಭಿಯೋಜಕರ ಕೋರಿಕೆಯನ್ನು ತಿರಸ್ಕರಿಸಿ ಉಳಿದ ಸಾಕ್ಷಿದಾರರ ವಿಚಾರಣೆಯನ್ನು ಕೈಬಿಡಲಾಗಿರುತ್ತದೆ.

14. ಅಭಿಯೋಜಕರು ಈ ಪ್ರಕರಣದ ಅಸಾ-1 ರಿಂದ 4 ರವರು ನ್ಯಾಯಾಲಯದ ಹೊರಗೆ ರಾಜಿ ಮಾಡಿಕೊಂಡಿದ್ದು, ಆರೋಪಿತರಿಗೆ ಶಿಕ್ಷೆ ತಪ್ಪಿಸುವ ಸಲುವಾಗಿ ಅಸಾ-1 ರಿಂದ 4 ರವರು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿರುವುದರಿಂದ ಆರೋಪಿತರನ್ನು ಸೂಕ್ತ ರೀತಿಯಲ್ಲಿ ಶಿಕ್ಷಿಸಬೇಕೆಂದು ತಮ್ಮ ವಾದ ಮಂಡಿಸಿರುತ್ತಾರೆ. ಆರೋಪಿತರ ಪರ ವಕೀಲರು ತಮ್ಮ ವಾದದಲ್ಲಿ ಪ್ರಕರಣದಲ್ಲಿ ಅಸಾ-1 ರಿಂದ 4 ರವರೇ ತಮ್ಮ ಸಾಕ್ಷ್ಯದಲ್ಲಿ ತಮಗೆ ಆರೋಪಿತರಿಂದ ಯಾವುದೇ ತೊಂದರೆ ಆಗಿರುವುದಿಲ್ಲವೆಂದು ನುಡಿದಿರುವ ಕಾರಣ ಆರೋಪಿತರನ್ನು ದೋಷಮುಕ್ತಗೊಳಿಸಬೇಕೆಂದು ವಾದ ಮಂಡಿಸಿರುತ್ತಾರೆ.

Visit **ecourts.gov.in** for updates or download mobile app “**eCourts Services**” from Android or iOS

15. ಪ್ರಸ್ತುತ ಪ್ರಕರಣದಲ್ಲಿ ಅಭಿಯೋಜನೆಯು ಹಾಜರುಪಡಿಸಿದ ಎಲ್ಲಾ ಮೌಖಿಕ ಹಾಗೂ ದಾಖಲಾತಿ ಸಾಕ್ಷ್ಯವನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಪ್ರಸ್ತುತ ಪ್ರಕರಣದ ಅಸಾ-1 ರವರು ಪಿರ್ಯಾದುದಾರರು, ಗಾಯಾಳು ಮತ್ತು ಮಹಜರು ಸಾಕ್ಷಿದಾರರಾಗಿ ಹಾಗೂ ಅಸಾ-2 ರಿಂದ 4 ರವರು ಗಾಯಾಳು ಮತ್ತು ಪ್ರತ್ಯಕ್ಷ ಸಾಕ್ಷಿದಾರರಾಗಿ ಪ್ರಕರಣದಲ್ಲಿ ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಹಾಗೂ ಆರೋಪಿತರೊಡನೆ ರಾಜಿ ಮಾಡಿಕೊಂಡಿರುವುದಾಗಿ ನುಡಿದಿರುತ್ತಾರೆ. ಆದುದರಿಂದ ಅಭಿಯೋಜನೆಯು ಆರೋಪಿತರ ವಿರುದ್ಧ ಧೂಷಿಸಲಾದ ಭಾರತೀಯ ದಂಡ ಸಂಹಿತೆ ಕಲಂ 504, 448, 323 ಮತ್ತು 506 ಸಹವಾಚಕ ಕಲಂ 149 ರಡಿಯಲ್ಲಿನ ಒಳಾಂಶಗಳನ್ನು ಸಂಶಯಾತೀತವಾಗಿ ರುಜುವಾತು ಪಡಿಸಲು ವಿಫಲವಾಗಿರುವುದರಿಂದ ಸಂಶಯದ ಲಾಭವನ್ನು ಆರೋಪಿತರಿಗೆ ನೀಡಿ, ಆರೋಪಿತರು ಬಿಡುಗಡೆಗೆ ಅರ್ಹರೆಂದು ಅಭಿಪ್ರಾಯಪಟ್ಟು ಅಂಶ-1 ರಿಂದ 4 ಕ್ಕೆ ನಕಾರಾತ್ಮಕವಾಗಿ ಉತ್ತರಿಸುತ್ತಿದ್ದೇನೆ.

16. <u>ಅಂಶ - **5**</u> ಃ ಮೇಲೆ ಚರ್ಚಿಸಿದ ಎಲ್ಲಾ ಕಾರಣಗಳಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ ಃ

-ಃ <u>ಆದೇಶ</u> ಃ-

ದಂಡ ಪ್ರಕ್ರಿಯಾ ಸಂಹಿತೆ ಕಲಂ 248(1) ರಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಆರೋಪಿತರನ್ನು ಭಾರತೀಯ ದಂಡ ಸಂಹಿತೆ ಕಲಂ 504, 448, 323 ಮತ್ತು 506 ಸಹವಾಚಕ ಕಲಂ 149 ರಡಿಯಲ್ಲಿನ ಆರೋಪಗಳಿಂದ ದೋಷಮುಕ್ತಗೊಳಿಸಲಾಗಿದೆ.

ಆರೋಪಿತರ ವೈಯುಕ್ತಿಕ ಬಾಂಡ್ ಹಾಗೂ ಜಾಮೀನು ಬಾಂಡ್ ಈ ಆದೇಶವಾದ ದಿನದಿಂದ ರದ್ದುಗೊಳಿಸಲಾಗಿದೆ.

Visit **ecourts.gov.in** for updates or download mobile app "**eCourts Services**" from Android or iOS

KACM710016162018

ಆರೋಪಿತರು ದಂಡ ಪ್ರಕ್ರಿಯಾ ಸಂಹಿತೆ ಕಲಂ 437(ಎ) ರಡಿಯಲ್ಲಿ ಸಲ್ಲಿಸಿದ ವೈಯುಕ್ತಿಕ ಬಾಂಡ್ ಹಾಗೂ ಜಾಮೀನು ಬಾಂಡ್ ಈ ಆದೇಶವಾದ ದಿನದಿಂದ ಆರು ತಿಂಗಳುವರೆಗೆ ಊರ್ಜಿತವಾಗಿರುತ್ತದೆ.

(ಈ ತೀರ್ಪನ್ನು ಶೀಘ್ರಲಿಪಿಗಾರರಿಗೆ ಗಣಕಯಂತ್ರದ ಮೂಲಕ ನೇರ ಉಕ್ತಲೇಖನ ಕೊಟ್ಟು, ಅವರು ಬೆರಳಚ್ಚು ಮಾಡಿದ ನಂತರ, ಓದಿ ತಿದ್ದುಪಡಿ ಮಾಡಿ, ತೆರೆದ ನ್ಯಾಯಾಲಯದಲ್ಲಿ ದಿನಾಂಕ 17 ನೇ ಮಾರ್ಚ್ 2026 ರಂದು ಘೋಷಿಸಲಾಯಿತು)

URMILA V
Digitally signed by URMILA V
Date: 2026.03.17 17:14:41 +0530

ಸಹಿ
**(**ಊರ್ಮಿಳ**.**ವಿ**.)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ**.**ದ**.**ನ್ಯಾ**.**ದಂ**.,** ತರೀಕೆರೆ**.**

## ಅನುಬಂಧ

ಅಭಿಯೋಜನೆಯ ಪರ ವಿಚಾರಣೆ ಮಾಡಲ್ಪಟ್ಟ ಸಾಕ್ಷಿಗಳ ಪಟ್ಟಿ ಃ-

| | | |
|---|---|---|
| ಅಸಾ-1 | ಃ | ಶ್ರೀಮತಿ ರಂಜಿತಾ |
| ಅಸಾ-2 | ಃ | ಶ್ರೀಮತಿ ರಾಧ |
| ಅಸಾ-3 | ಃ | ಶ್ರೀಮತಿ ಮಲ್ಲಿಗ |
| ಅಸಾ-4 | ಃ | ಶ್ರೀಮತಿ ಲಕ್ಷ್ಮಿ |

ಅಭಿಯೋಜನೆಯ ಪರ ಗುರುತು ಮಾಡಲ್ಪಟ್ಟ ದಾಖಲಾತಿಗಳು ಃ-

| | | |
|---|---|---|
| ನಿಪಿ-1 | ಃ | ದೂರು |
| ನಿಪಿ-2 | ಃ | ಮಹಜರು |
| ನಿಪಿ-3 | ಃ | ಛಾಯಚಿತ್ರಗಳು |
| ನಿಪಿ-4 | ಃ | ಅಸಾ-2 ರವರ ಹೇಳಿಕೆ |
| ನಿಪಿ-5 | ಃ | ಅಸಾ-3 ರವರ ಹೇಳಿಕೆ |
| ನಿಪಿ-6 | ಃ | ಅಸಾ-4 ರವರ ಹೇಳಿಕೆ |

ಅಭಿಯೋಜನೆಯ ಪರ ಗುರುತು ಮಾಡಲ್ಪಟ್ಟ ಮುದ್ದೆಮಾಲುಗಳು ಃ-

- ಇಲ್ಲ -

Visit **ecourts.gov.in** for updates or download mobile app "**eCourts Services**" from Android or iOS

KACM710016162018

ಆರೋಪಿತರಪ ಪರ ವಿಚಾರಣೆ ಮಾಡಲ್ಪಟ್ಟ ಸಾಕ್ಷಿಗಳ ಪಟ್ಟಿ ಃ-

- ಇಲ್ಲ -

ಆರೋಪಿತರ ಪರ ಗುರುತು ಮಾಡಲ್ಪಟ್ಟ ದಾಖಲಾತಿಗಳು ಃ-

- ಇಲ್ಲ -

URMILA V

Digitally signed by URMILA V
Date: 2026.03.17 17:14:32 +0530

ಸಹಿ
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.

Visit **ecourts.gov.in** for updates or download mobile app "**eCourts Services**" from Android or iOS